Akashvani : Bangalore
Regional Bulletin In Kannada
11.04.2025 / 18.40 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷಾ ವರದಿ ಕುರಿತು ಮುಂದಿನ ಸಂಪುಟ ಸಭೆಯಲ್ಲಿ ಚರ್ಚೆ - ಎಚ್.ಕೆ. ಪಾಟೀಲ್
- ರಾಜ್ಯದಲ್ಲಿ ೧೦ ಸಾವಿರ ಕಿಲೋಮೀಟರ್ ರೈಲ್ವೆ ಮಾರ್ಗದಲ್ಲಿ ದೇಶೀಯ ನಿರ್ಮಿತ ಕವಚ ತಂತ್ರಜ್ಞಾನ ಬಳಕೆಗೆ ತೀರ್ಮಾನ
- ಮೀನುಗಾರಿಕೆ ಜಿಲ್ಲೆಗಳಿಗೆ ಪೂರಕವಾದ ಸಮಗ್ರ ನೀತಿ ಅಗತ್ಯ - ಯು.ಟಿ. ಖಾದರ್
- ಮಂಗಳೂರಿನಲ್ಲಿ ಕೇಂದ್ರೀಯ ಸಾಗರಶಾಸ್ತ್ರ ವಿಶ್ವವಿದ್ಯಾಲಯ ಸ್ಥಾಪನೆಗೆ ಯೋಜನಾ ವರದಿ ಸಿದ್ಧ

<><*<><>*><>

ಈ ತಿಂಗಳ ೧೭, ಗುರುವಾರ ಸಂಜೆ ೪ ಗಂಟೆಗೆ ಸಚಿವ ಸಂಪುಟದ ವಿಶೇಷ ಸಭೆಯನ್ನು ವಿಧಾನಸೌಧದ ಸಚಿವ ಸಂಪುಟ ಸಭಾ ಮಂದಿರದಲ್ಲಿ ಕರೆಯಲಾಗಿದೆ. ಸದರಿ ಸಚಿವ ಸಂಪುಟ ಸಭೆಯಲ್ಲಿ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಸಲ್ಲಿಸಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷಾ ವರದಿಯ ಕುರಿತು ಚರ್ಚಿಸಲಾಗುವುದು ಎಂದು ಕಾನೂನು ಮತ್ತು ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ್ ತಿಳಿಸಿದ್ದಾರೆ. ಇಂದು ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ನಡೆದ ಚರ್ಚೆಯ ಮಾಹಿತಿಯನ್ನು ಅವರು, ಸಚಿವ ಶಿವರಾಜತ್ ತಂಗಡಗಿ ಅವರೊಂದಿಗೆ ಸುದ್ದಿಗಾರರಿಗೆ ವಿವರಿಸಿದರು. ಸಮೀಕ್ಷೆ ವರದಿಯನ್ನು ಸಚಿವ ಸಂಪುಟದಲ್ಲಿ ಮಂಡಿಸಲಾಗಿದೆ. ಸಮೀಕ್ಷೆ ಕುರಿತು ಪೂರ್ಣ ಪ್ರಮಾಣದ ಚರ್ಚೆಗೆ ಜಾತ್ಯಾತೀತವಾಗಿ ಸಚಿವರ ಸಮ್ಮತಿ ದೊರೆತಿದೆ. ಇಂದು ದೊರೆತಿರುವ ಮಾಹಿತಿಯನ್ನು ಎಲ್ಲ ಸಚಿವ ಸಂಪುಟದ ಸಚಿವರಿಗೆ ತಲುಪಿಸಲಾಗುವುದು. ಇದೇ ೧೭ ರಂದು ಚರ್ಚೆಯ ನಂತರ ಆ ಕುರಿತು ನಿರ್ಣಯ ಅಥವಾ ಅಗತ್ಯ ಬದಲಾವಣೆ ಇದ್ದಲ್ಲಿ ನಿರ್ಧರಿಸಲಾಗುವುದು ಎಂದರು.

ಧ್ವನಿ : ಎಚ್.ಕೆ. ಪಾಟೀಲ್ ( ೪೦ ಸೆಕೆಂಡ್ಸ್)

ಕರ್ನಾಟಕ ಲೋಕಸೇವಾ ಆಯೋಗದ ಅಧ್ಯಕ್ಷರು ಮತ್ತು ಸದಸ್ಯರಿಗೆ ೭ನೇ ವೇತನ ಆಯೋಗದಂತೆ ೨೦೧೭ರ ಜನವರಿ ೧ ರಿಂದ ಅನ್ವಯವಾಗುವಂತೆ ವೇತನ ನೀಡಲು ಸಚಿವ ಸಂಪುಟದಲ್ಲಿ ಅನುಮೋದನೆ ನೀಡಲಾಗಿದೆ.  ಸರ್ಕಾರದ ವಿವಿಧ ಇಲಾಖೆಗಳು ಮತ್ತು

ಪ್ರಾಧಿಕಾರಗಳಲ್ಲಿ ಬಾಕಿ ಪ್ರಕರಣಗಳ ಅಭಿಯೋಜನಾ ಮಂಜೂರಾತಿಗೆ ಒಂದು ತಿಂಗಳಲ್ಲಿ ಅಗತ್ಯಕ್ರಮ ಕೈಗೊಳ್ಳುವಂತೆ ಮತ್ತು ಆ ಕುರಿತು ಮಾಹಿತಿ ನೀಡುವಂತೆ ಸಂಬಂಧಪಟ್ಟ ಇಲಾಖೆಗಳಿಗೆ ನಿರ್ದೇಶಿಸಲು ಸಂಪುಟದ ಅನುಮೋದನೆ ದೊರೆತಿದೆ ಎಂದು ಎಚ್.ಕೆ. ಪಾಟೀಲ್ ತಿಳಿಸಿದರು. ೩೮ ತಾಲೂಕು ಆಸ್ಪತ್ರೆ ಹಾಗೂ ಶಂಕಿತ ಕ್ಷಯರೋಗಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭೇಟಿ ನೀಡುವ ೧೨೧ ಸಮುದಾಯ ಆರೋಗ್ಯ ಕೇಂದ್ರಗಳಿಗೆ ೧೪ ಕೋಟಿ ೨೪ ಲಕ್ಷ ರೂಪಾಯಿ ವೆಚ್ಚದಲ್ಲಿ ಎನ್‌ಎಎಟಿ ಯಂತ್ರಗಳನ್ನು ಸರಬರಾಜು ಮಾಡಲು ತೀರ್ಮಾನಿಸಲಾಗಿದೆ. ಐದು ಇಎಸ್‌ಐ ಆಸ್ಪತ್ರೆಗಳಿಗೆ ವಿವಿಧ ಉಪಕರಣಗಳ ಖರೀದಿಗೆ ಆಡಳಿತಾತ್ಮಕ ಅನುಮೋದನೆ ನೀಡಲು ಸಚಿವ ಸಂಪುಟ ನಿರ್ಣಯಿಸಿದೆ ಎಂದು ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿಲಾಯಿತು.

<><*<><>*><>

ರಾಜ್ಯದಲ್ಲಿ ರೈಲ್ವೆ ಅಪಘಾತ ತಡೆಯುವ ಉದ್ದೇಶದಿಂದ ೧೦ ಸಾವಿರ ಕಿಲೋಮೀಟರ್ ವ್ಯಾಪ್ತಿಯಲ್ಲಿ ದೇಶೀಯ ನಿರ್ಮಿತ ಕವಚ ತಂತ್ರಜ್ಞಾನವನ್ನು ಬಳಸಲು ತೀರ್ಮಾನಿಸಲಾಗಿದೆ ಎಂದು ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ತಿಳಿಸಿದ್ದಾರೆ. ಹಾವೇರಿ ರೈಲ್ವೆ ನಿಲ್ದಾಣದಲ್ಲಿಂದು, ಬೆಂಗಳೂರು-ಧಾರವಾಡ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲಿನ ನಿಲುಗಡೆಗೆ ಚಾಲನೆ ನೀಡಿ ಮಾತನಾಡಿದ ಅವರು, ರಾಣೇಬೆನ್ನೂರು-ಶಿವಮೊಗ್ಗ-ಶಿಕಾರಿಪುರ ರೈಲು ಮಾರ್ಗಕ್ಕೆ ರಾಜ್ಯ ಸರ್ಕಾರ ಜಮೀನು ನೀಡಿದರೆ, ಶೀಘ್ರದಲ್ಲೇ ಕಾಮಗಾರಿ ಆರಂಭಿಸಲಾಗುವುದು ಎಂದರು. ಹುಬ್ಬಳ್ಳಿ-ಅಂಕೋಲ, ತಳಕಲ್ಲ-ಕುಷ್ಟಗಿ ಡಿ.ಆರ್.ಟಿ ಮುಗಿದಿದ್ದು, ಶೀಘ್ರದಲ್ಲೇ ಉದ್ಘಾಟನೆ ನೆರವೇರಿಸಲಾಗುವುದು. ೧೫ ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ ವಿವಿಧ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ. ಬೆಳಗಾವಿ, ಹುಬ್ಬಳ್ಳಿ ಸೇರಿದಂತೆ ವಿವಿಧ ನಿಲ್ದಾಣಗಳನ್ನು ಇನ್ನೂ ಹೆಚ್ಚಿನ ರೈಲು ಸಂಚಾರಕ್ಕೆ ಸಜ್ಜಾಗಿಸುವ ಚಿಂತನೆ ಇದೆ. ಹಾವೇರಿ ನಿಲ್ದಾಣಕ್ಕೆ ೨೪ ಕೋಟಿ ರೂಪಾಯಿ ನೀಡಲಾಗಿದೆ ಎಂದು ಸಚಿವ ಸೋಮಣ್ಣ ತಿಳಿಸಿದರು.

ಧ್ವನಿ : ಸಚಿವ ವಿ. ಸೋಮಣ್ಣ (೨೯ ಸೆಕೆಂಡ್‌ಗಳು)

ಸಮಾರಂಭದಲ್ಲಿ ಭಾಗವಹಿಸಿದ್ದ ಸಂಸದ ಬಸವರಾಜ ಬೊಮ್ಮಾಯಿ ಮಾತನಾಡಿ, ರೈಲ್ವೆ ಸಿಗ್ನಲ್ ವ್ಯವಸ್ಥೆಯನ್ನು ಸುಧಾರಿಸಿರುವ ಪರಿಣಾಮವಾಗಿ ದೇಶದಲ್ಲಿ ರೈಲ್ವೆ ಅಪಘಾತಗಳು ಕಡಿಮೆಯಾಗಿವೆ. ಪ್ರಧಾನಮಂತ್ರಿ ನರೇದ್ರ ಮೋದಿ ನೇತೃತ್ವದ ಸರ್ಕಾರ ತಂದಿರುವ ಕ್ರಾಂತಿಕಾರಕ ಬದಲಾವಣೆಗಳಿಂದಾಗಿ ರೈಲ್ವೆ ಇಲಾಖೆಯ ಆದಾಯ ೪ ಪಟ್ಟು ಹೆಚ್ಚಾಗಿದೆ ಎಂದರು.

ಧ್ವನಿ : ಬಸವರಾಜ ಬೊಮ್ಮಾಯಿ (೩೦ ಸೆಕೆಂಡ್‌ಗಳು)

<><*<><>*><>

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಭ್ರಷ್ಟಾಚಾರದಲ್ಲಿ ಮುಳುಗಿದ್ದು, ಬೆಲೆ ಏರಿಕೆಯಿಂದ ಜನಸಾಮಾನ್ಯರು ತತ್ತರಿಸಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದ್ದಾರೆ. ಉತ್ತರಕನ್ನಡ ಜಿಲ್ಲೆಯ ಯಲ್ಲಾಪುರದಲ್ಲಿಂದು ಜನಾಕ್ರೋಶ ಯಾತ್ರೆಗೆ ಚಾಲನೆ ನೀಡಿ ಮಾತನಾಡಿದ ಅವರು, ದಿನನಿತ್ಯ ಬಳಕೆಯ ೫೦ಕ್ಕೂ ಹೆಚ್ಚು ವಸ್ತುಗಳ ಬೆಲೆ ಏರಿಕೆ ಮಾಡಲಾಗಿದೆ. ಹಾಲಿನಿಂದ ಹಿಡಿದು ಕಸದವರೆಗೆ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ದುಬಾರಿಯಾಗಿದ್ದು, ಸರ್ಕಾರದ ವಿರುದ್ಧ ಜನರು ಬೇಸತ್ತಿದ್ದಾರೆ ಎಂದರು.

<><*<><>*><>

ದಕ್ಷಿಣ ಕನ್ನಡ, ಉಡುಪಿ ಹಾಗೂ ಉತ್ತರ ಕನ್ನಡ ಜಿಲ್ಲೆಗಳ ಮೀನುಗಾರರಿಗೆ ಪೂರಕವಾದ ಸಮಗ್ರ ಮೀನುಗಾರಿಕಾ ನೀತಿ ರೂಪಿಸುವ ಅಗತ್ಯವಿದೆ ಎಂದು ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ಹೇಳಿದ್ದಾರೆ. ಮಂಗಳೂರಿನಲ್ಲಿ ನಡೆದ ಮೀನುಗಾರ ಮಹಿಳೆಯರ ಸಮಾವೇಶ ಉದ್ಘಾಟಿಸಿ ಮಾತನಾಡಿದ ಅವರು, ಉಳ್ಳಾಲ ಕೋಟೆಪುರದಲ್ಲಿ ಮೀನುಗಾರಿಕಾ ಜೆಟ್ಟಿ ನಿರ್ಮಾಣಕ್ಕೆ ೫ ಕೋಟಿ ರೂಪಾಯಿ ಬಿಡುಗಡೆಯಾಗಿದೆ. ಇದನ್ನು ಮುಂಬರುವ ದಿನಗಳಲ್ಲಿ ಬಂದರಿನಂತೆ ಅಭಿವೃದ್ಧಿಪಡಿಸಲಾಗುವುದು ಎಂದರು. ಮೀನುಗಾರರು ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ದೊರೆಕಿಸುವ ಕಡೆ ಆಸಕ್ತರಾಗಬೇಕು. ಶಿಕ್ಷಣದಿಂದ ಬಡತನ ನಿರ್ಮೂಲನೆ ಸಾಧ್ಯ ಎಂದು ಯು.ಟಿ. ಖಾದರ್ ಹೇಳಿದರು.

<><*<><>*><>

ಬೇಸಿಗೆ ರಜೆಯ ಪ್ರಯಾಣಿಕರ ದಟ್ಟಣೆಯನ್ನು ಕಡಿಮೆಮಾಡುವ ಸಲುವಾಗಿ ಬೆಳಗಾವಿ-ಬೆಂಗಳೂರು ಎಸ್ಎಂವಿಟಿ ಹಾಗೂ ಬೆಂಗಳೂರು ಎರ್ನಾಕುಲಂ ನಿಲ್ದಾಣಗಳ ನಡುವೆ ನೈಋತ್ಯ ರೈಲ್ವೆ ವಿಶೇಷ ರೈಲು ಸಂಚಾರವನ್ನು ಆರಂಭಿಸಿದೆ. ಬೆಳಗಾವಿ-ಬೆಂಗಳೂರು ರೈಲು ನಾಳೆ ಬೆಳಗಿನ ಜಾವ ೪ ಗಂಟೆಗೆ ಬೆಳಗಾವಿಯಿಂದ ಹೊರಟು ಮಧ್ಯಾಹ್ನ ೩.೩೦ಕ್ಕೆ ಬೆಂಗಳೂರು ತಲುಪಲಿದೆ. ಏಪ್ರಿಲ್ ೧೫ ರಂದು ಈ ರೈಲು ಬೆಂಗಳೂರಿನಿಂದ ಮಧ್ಯಾಹ್ನ ೧೨ಕ್ಕೆ ಹೊರಟು ರಾತ್ರಿ ೧೧.೩೦ಕ್ಕೆ ಬೆಳಗಾವಿ ತಲುಪುವುದು. ಲೋಂಡಾ, ಅಳ್ನಾವರ್, ಧಾರವಾಡ, ಹುಬ್ಬಳ್ಳಿ, ಹಾವೇರಿ, ದಾವಣಗೆರೆ, ಬಿರೂರು, ಅರಸೀಕೆರೆ, ತುಮಕೂರು ಹಾಗೂ ಚಿಕ್ಕಬಣಾವರ ನಿಲ್ದಾಣಗಳಲ್ಲಿ ಈ ರೈಲಿಗೆ ನಿಲುಗಡೆ ಇರುತ್ತದೆ. ಬೆಂಗಳೂರು-ಎರ್ನಾಕುಲಂ ರೈಲು ನಾಳೆ ಸಂಜೆ ೪.೩೫ಕ್ಕೆ ಬೆಂಗಳೂರು ಬಿಟ್ಟು, ನಾಡಿದ್ದು, ಬೆಳಗಿನ ಜಾವ ೩.೦೦ ಗಂಟೆಗೆ ಎರ್ನಾಕುಲಂ ತಲುವುದು. ಏಪ್ರಿಲ್ ೧೪ರಂದು ಎರ್ನಾಕುಲಂನಿಂದ ರಾತ್ರಿ ೧೦ಕ್ಕೆ ಹೊರಟು ೧೫ನೇ ತಾರೀಕು ಬೆಳಗ್ಗೆ ೧೦.೫೫ಕ್ಕೆ ಬೆಂಗಳೂರಿಗೆ ಬರಲಿದೆ ಎಂದು ರೈಲ್ವೆ ಇಲಾಖೆ ಪ್ರಕಟಣೆ ತಿಳಿಸಿದೆ.

<><*<><>*><>

ಮಂಗಳೂರಿನಲ್ಲಿ ಕೇಂದ್ರೀಯ ಸಾಗರಶಾಸ್ತ್ರ ವಿಶ್ವವಿದ್ಯಾಲಯ ಸ್ಥಾಪನೆಗೆ ಸಂಬಂಧಿಸಿ ಯೋಜನಾ ವರದಿ ಸಿದ್ಧಪಡಿಸಲಾಗಿದ್ದು, ಶೀಘ್ರದಲ್ಲಿ ವರದಿಯನ್ನು ಕೇಂದ್ರ ಹಡಗು ಮತ್ತು ಬಂದರು ಸಚಿವಾಲಯಕ್ಕೆ ಸಲ್ಲಿಸಲಾಗುವುದು ಎಂದು ದಕ್ಷಿಣ ಕನ್ನಡ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ತಿಳಿಸಿದ್ದಾರೆ. ಮಂಗಳೂರಿನಲ್ಲಿಂದು ಸಾಗರ ವಲಯದ ಪ್ರತಿಕೂಲ ಪರಿಸ್ಥಿತಿ ಕಾರ್ಯಾಗಾರದಲ್ಲಿ ಮಾತನಾಡಿದ ಅವರು, ಇಂತಹ ಕೇಂದ್ರೀಯ ವಿಶ್ವವಿದ್ಯಾಲಯ ಸ್ಥಾಪನೆಗೆ ಮಂಗಳೂರಿಗಿಂತ ಪ್ರಶಸ್ತ ಸ್ಥಳ ಬೇರೊಂದಿಲ್ಲ. ವೀರರಾಣಿ ಅಬ್ಬಕ್ಕನ ಹೆಸರಿನಲ್ಲಿ ಈ ವಿಶ್ವವಿದ್ಯಾಲಯ ಸ್ಥಾಪನೆಯ ವರದಿಯನ್ನು ಸಚಿವಾಲಯಕ್ಕೆ ಸಲ್ಲಿಸಲಾಗುವುದು ಎಂದರು.

<><*<><>*><>

೨೦೨೬ರ ಗಣರಾಜ್ಯೋತ್ಸವದ ಸಂದರ್ಭದಲ್ಲಿ ಪ್ರಕಟಿಸುವ ದೇಶದ ಅತ್ಯುನ್ನತ ನಾಗರಿಕ ಪ್ರಶಸ್ತಿಗಳಾದ ಪ್ರತಿಷ್ಠಿತ ಪದ್ಮ ಪ್ರಶಸ್ತಿಗಳಿಗಾಗಿ ಸಾಧಕ ವ್ಯಕ್ತಿಗಳನ್ನು ನಾಮಾಂಕನಗೊಳಿಸುವ ಅವಧಿ ಜುಲೈ ೩೧ರವರೆಗೆ ಇರುತ್ತದೆ. ರಾಷ್ಟ್ರೀಯ ಪುರಸ್ಕಾರ ಜಾಲತಾಣದಲ್ಲಿ ಆನ್‌ಲೈನ್ ಮೂಲಕ ಮಾತ್ರ ನಾಮಾಂಕನಗಳು ಮತ್ತು ಶಿಫಾರಸ್ಸುಗಳನ್ನು ಸ್ವೀಕರಿಸಲಾಗುವುದು ಎಂದು ಕೇಂದ್ರ ಗೃಹ ಸಚಿವಾಲಯ ತಿಳಿಸಿದೆ.

<><*<><>*><>

ಸಂಕ್ಷಿಪ್ತ ಸುದ್ದಿಗಳು...

೧. ಇದೇ ೧೪ರಂದು ಸಂವಿಧಾನ ಶಿಲ್ಪಿ, ಭಾರತ ರತ್ನ, ಬಾಬಾ ಸಾಹೇಬ್ ಅಂಬೇಡ್ಕರ್ ಅವರ ೧೩೪ನೇ ಜಯಂತಿಯನ್ನು ಬೆಂಗಳೂರು ವಿಧಾನಸೌಧದ ಆವರಣದಲ್ಲಿ ಅಧಿಕೃತವಾಗಿ ಆಚರಿಸಲಾಗುವುದು. ಡಾ. ಬಿ.ಆರ್. ಅಂಬೇಡ್ಕರ್ ಪ್ರಶಸ್ತಿ ಪ್ರದಾನವೂ ನಡೆಯಲಿದೆ. ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ೧೫ ಮಂದಿ ಗಣ್ಯರಿಗೆ ೨೦೨೩, ೨೪ ಮತ್ತು ೨೫ನೇ ಸಾಲಿನ ಡಾ. ಬಿ.ಆರ್. ಅಂಬೇಡ್ಕರ್ ಪ್ರಶಸ್ತಿಗಳನ್ನು ವಿತರಿಸಿ ಗೌರವಿಸಲಾಗುವುದು.

೨. ಮಂಡ್ಯ ಮೈಶುಗರ್ ಸಕ್ಕರೆ ಕಾರ್ಖಾನೆಯ ಅಧ್ಯಕ್ಷ ಸಿ.ಡಿ. ಗಂಗಾಧರ್ ಹಾಗೂ ಜಿಲ್ಲಾಧಿಕಾರಿ ಡಾ.ಕುಮಾರ ಅವರು ಇಂದು ಮೈ ಶುಗರ್ ಸಕ್ಕರೆ ಕಾರ್ಖಾನೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಸಕ್ಕರೆ ಕಾರ್ಖಾನೆಯಲ್ಲಿ ಕಬ್ಬು ನುರಿಸುವ ಕೆಲಸ ಪ್ರಾರಂಭಿಸಲು ಕಾರ್ಖಾನೆಯಲ್ಲಿ ದುರಸ್ತಿಯಲ್ಲಿರುವ ಯಂತ್ರಗಳನ್ನು ಸರಿಪಡಿಸಿ ರೈತರಿಗೆ ತೊಂದರೆಯಾಗದಂತೆ ಕೆಲಸಗಳು ಆರಂಭವಾಗಬೇಕು ಎಂದು ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಸೂಚನೆ ನೀಡಿದರು.

೩. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲೂಕಿನ ಬೂದಿಗೆರೆ ಗ್ರಾಮದ ಸರ್ಕಾರಿ ಮಾದರಿ ಪ್ರಾಥಿಮಿಕ ಶಾಲೆಯಲ್ಲಿ ಸಂಸದರ ಸ್ಥಳೀಯ ಪ್ರದೇಶಾಭಿವೃದ್ಧಿ ಅನುದಾನದ ಅಡಿ ಮಾದರಿ ಶಾಲಾ ಕೊಠಡಿಗಳ ನಿರ್ಮಾಣ ಕಾಮಗಾರಿಗೆ ಚಿಕ್ಕಬಳ್ಳಾಪುರ ಲೋಕಸಭಾ ಸಂಸದ ಡಾ. ಕೆ. ಸುಧಾಕರ್ ಗುದ್ದಲಿ ಪೂಜೆ ನೆರವೇರಿಸಿದರು

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೬.೩೫ ಕ್ಕೆ <>*><>